ಕರ್ನಾಟಕ ಸರ್ಕಾರ
ಮಕ್ಕಳ ರಕ್ಷಣಾ ನಿರ್ದೇಶನಾಲಯ
C/o ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಂದನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ॥ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001, ಕರ್ನಾಟಕ
E-mail ID:icps.kar@gmail.com Phone No: 080-22879381

ಸಂಖ್ಯೆ:ಕೆಎಸ್ಐಸಿಪಿಎಸ್/ಗ್ರಾ.ಸ/46/2019-20 ದಿನಾಂಕ:10.11.2020

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು
ಜಿಲ್ಲಾ ಮಕ್ಕಳ ರಕ್ಷಣಾ ಘಟಕ
ಎಲ್ಲಾ ಜಿಲ್ಲೆಗಳು.

ಮಾನ್ಯರೇ,

ವಿಷಯ: ಮಕ್ಕಳ ಹಕ್ಕುಗಳ ರಕ್ಷಣೆಗಾಗಿ 14 ನವೆಂಬರ್ 2020 ರಿಂದ 24 ಜನವರಿ 2021ರವರೆಗೆ 10 ವಾರಗಳ "ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ" ಮತ್ತು ಪಂಚಾಯತಿಗಳಲ್ಲಿ ಮಕ್ಕಳ ಹಕ್ಕುಗಳ ಗ್ರಾಮ ಸಭೆ ನಡೆಸುವ ಬಗ್ಗೆ

ಉಲ್ಲೇಖ: ಆಯುಕ್ತರು, ಪಂಚಾಯತ್ ರಾಜ್ ಇವರ ಪತ್ರ ಸಂಖ್ಯೆ:
ಅ.ಸ.ಪ.ಸಂಖ್ಯೆ:ಕಪಂರಾಆ/ಅಭಿವೃದ್ಧಿ/93/2020 ದಿನಾಂಕ:074-11-2020

**********

ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ, ಉಲ್ಲೇಖಿತ ಪತ್ರದಂತೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ವತಿಯಿಂದ 14ನೇ ನವೆಂಬರ್ 2020 ರಿಂದ 24 ಜನವರಿ 2021ರವರೆಗೆ 10 ವಾರಗಳು "ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ" ಮತ್ತು ಪಂಚಾಯತಿಗಳಲ್ಲಿ ಮಕ್ಕಳ ಹಕ್ಕುಗಳ ಗ್ರಾಮ ಸಭೆಯನ್ನು ಪರಿಣಾಮಕಾರಿಯಾಗಿ ನಡೆಸುವುದು ಹಾಗೂ ಗ್ರಾಮ ಸಭೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಮಕ್ಕಳಿಗೆ ಸಂಬಂಧಿಸಿದ ಸಮಸ್ಯೆಗಳು/ಬೇಡಿಕೆಗಳು/ಪ್ರಶ್ನೆಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳುವುದು ಹಾಗೂ ಅಭಿಯಾನ ಕುರಿತು ತಮ್ಮ ವ್ಯಾಪ್ತಿಯ ವಾಟ್ಸ್‌ಪ್ ಗ್ರೂಪ್‌ನಲ್ಲಿ ಹಂಚಿಕೊಳ್ಳುವುದು ಹಾಗೂ ಮಕ್ಕಳಿಗೆ ವಿಶೇಷ ಮತ್ತು ವಿನೂತನ ಕಾರ್ಯಕ್ರಮಗಳನ್ನು ಆಯೋಜಿಸುವುದು ಹಾಗೂ ಸದರಿ ಅಭಿಯಾನ ಕೈಗೊಳ್ಳುವುದಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರಿಗೆ ಸಹಕರಿಸಲು ಕೋರಿದೆ.

ತಮ್ಮ ವಿಶ್ವಾಸಿ,

ಯೋಜನಾ ನಿರ್ದೇಶಕರು,
ಮಕ್ಕಳ ರಕ್ಷಣಾ ನಿರ್ದೇಶನಾಲಯ
ಬೆಂಗಳೂರು.

/ ಪ್ರಿಯಾಂಕ ಮೇರಿ ಫ್ರಾನ್ಸಿಸ್, ಭಾ.ಆ.ಸೇ.,
ಆಯುಕ್ತರು, ಪಂಚಾಯತ್ ರಾಜ್
Priyanka Mary Francis, I.A.S.
COMMISSIONER, PANCHAYAT RAJ

ಕರ್ನಾಟಕ ಸರ್ಕಾರ
Government of Karnataka

ಪಂಚಾಯತ್ ರಾಜ್ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
Panchayat Raj Commissionerate
Rural Development & Panchayat Raj Department

**ಅ.ಸ.ಪ.ಸಂಖ್ಯೆ: ಕಪಂರಾಆ/ಅಭಿವೃದ್ಧಿ/93/2020**

ದಿನಾಂಕ: 07-11-2020

ಮಾನ್ಯರೇ,

**ವಿಷಯ:** ಮಕ್ಕಳ ಹಕ್ಕುಗಳ ರಕ್ಷಣೆಗಾಗಿ 14 ನವೆಂಬರ್ 2020 ರಿಂದ 24 ಜನವರಿ 2021ರವರೆಗೆ 10 ವಾರಗಳ **"ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ"** ಮತ್ತು ಗ್ರಾಮ ಪಂಚಾಯತಿಗಳಲ್ಲಿ "ಮಕ್ಕಳ ಹಕ್ಕುಗಳ ಗ್ರಾಮ ಸಭೆ" ನಡೆಸುವ ಕುರಿತು.

**ಉಲ್ಲೇಖ:** ಸುತ್ತೋಲೆ ಸಂಖ್ಯೆ:ಕಪಂರಾಆ/ಅಭಿವೃದ್ಧಿ/93/2020 ದಿನಾಂಕ 04-11-2020.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಉಲ್ಲೇಖಿತ ಸುತ್ತೋಲೆಯನ್ನು ಹೊರಡಿಸಲಾಗಿದೆ (ಪ್ರತಿ ಲಗತ್ತಿಸಿದೆ). ಸದರಿ ಸುತ್ತೋಲೆಯಲ್ಲಿ ತಿಳಿಸಿರುವಂತೆ 14ನೇ ನವೆಂಬರ್ 2020 ರಿಂದ 24 ಜನವರಿ 2021ರವರೆಗೆ 10 ವಾರಗಳ **"ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ"** ಮತ್ತು ಗ್ರಾಮ ಪಂಚಾಯತಿಗಳಲ್ಲಿ "ಮಕ್ಕಳ ಹಕ್ಕುಗಳ ಗ್ರಾಮ ಸಭೆ"ಯನ್ನು ಪರಿಣಾಮಕಾರಿಯಾಗಿ ನಡೆಸಲು ಸಂಬಂಧಿಸಿದಂತೆ ಸಕ್ರಿಯವಾಗಿ ಭಾಗವಹಿಸಲು, ಮಕ್ಕಳಿಗೆ ಸಂಬಂಧಿಸಿದ ಸಮಸ್ಯೆಗಳು/ಬೇಡಿಕೆಗಳು/ಪ್ರಶ್ನೆಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಲು ಹಾಗೂ ಅಭಿಯಾನ ಕುರಿತು ತಮ್ಮ ವ್ಯಾಪ್ತಿಯ ಜಿಲ್ಲಾ ಹಂತದಲ್ಲಿರುವ ವಾಟ್ಸಪ್ ಗ್ರೂಪ್‌ನಲ್ಲಿ ಹಂಚಿಕೊಳ್ಳುವುದು ಸೇರಿದಂತೆ ಮಕ್ಕಳಿಗೆ ವಿಶೇಷ ಮತ್ತು ವಿನೂತನ ಕಾರ್ಯಕ್ರಮಗಳನ್ನು ಆಯೋಜಿಸಲು ಕೋರಿದೆ.

**"ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ"**ದ ಅಂಗವಾಗಿ ಗ್ರಾಮ ಪಂಚಾಯತಿಗಳಲ್ಲಿ ಆಯೋಜಿಸಲಾದ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಲು ಕೋರಿದೆ.

ಆದರಗಳೊಂದಿಗೆ,

ತಮ್ಮ ವಿಶ್ವಾಸಿ

(ಪ್ರಿಯಾಂಕ ಮೇರಿ ಫ್ರಾನ್ಸಿಸ್)

ಗೆ,
ಶ್ರೀಮತಿ ಪಲ್ಲವಿ ಆಕುರಾತಿ, ಭಾ.ಆ.ಸೇ,
ನಿರ್ದೇಶಕರು, (ಐ.ಸಿ.ಪಿ.ಎಸ್)
ಮಕ್ಕಳ ಸಮಗ್ರ ರಕ್ಷಣಾ ಯೋಜನಾ ನಿರ್ದೇಶನಾಲಯ,
ಬಹುಮಹಡಿಗಳ ಕಟ್ಟಡ, ಬೆಂಗಳೂರು.